ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ : 665

ಸದಸ್ಯರ ಹೆಸರು : ಶ್ರೀ ಕೆ. ಸಿ.ಕೊಂಡಯ್ಯ

(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 17.09.2021

ಉತ್ತರಿಸುವ ಸಚಿವರು : ಕೃಷಿ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ.	ಸಿರಿಧಾನ್ಯ ಬೆಳೆಗಾರರಿಗೆ ಉತ್ತೇಜನ ನೀಡಲು ಸರ್ಕಾರ ತಂದಿರುವ 'ರೈತ ಸಿರಿ ಯೋಜನೆ' ಯಾವ ಹಂತದಲ್ಲಿದೆ.	ಸಿರಿಧಾನ್ಯ ಬೆಳೆಗಾರರಿಗೆ ಉತ್ತೇಜನ ನೀಡಲು ಸರ್ಕಾರ ತಂದಿರುವ 'ರೈತ ಸಿರಿ ಯೋಜನೆಯಡಿ ಸಿರಿಧಾನ್ಯಗಳಾದ ನವಣೆ, ಹಾರಕ ಸಾಮೆ, ಕೊರಲೆ, ಬರಗು ಮತ್ತು ಊದಲು ಬೆಳೆಗಳನ್ನು (ರಾಗಿ, ಜೋಳ ಮತ್ತು ಸಜ್ಜೆ ಹೊರತುಪಡಿಸಿ) ಬೆಳೆಯುವ ಸಿರಿಧಾನ್ಯ ಬೆಳೆಗಾರರಿಗೆ ಬೆಳೆ ಸಮೀಕ್ಷೆ ಆಧಾರದ ಮೇರೆಗೆ ಗರಿಷ್ಠ ಎರಡು ಹೆಕ್ಟೇರ್ ಗೊಳಪಟ್ಟು ಪ್ರತೀ ಹೆಕ್ಟೇರ್ ಗೆ ರೂ.10000 ಗಳಂತೆ ಪ್ರೋತ್ಸಾಹಧನ ನೀಡಲು ಕ್ರಮಕೈಗೊಳ್ಳಲಾಗುತ್ತಿದ್ದು, ಬೆಳೆ ಸಮೀಕ್ಷೆ ವರದಿಯ ನಿರೀಕ್ಷಣೆಯಲ್ಲಿರುತ್ತದೆ.
ಆ.	ಈ ಯೋಜನೆಗೆ ರಾಜ್ಯದ ಯಾವ ಜಿಲ್ಲೆಗಳನ್ನು ಗುರುತಿಸಲಾಗಿದೆ; ಮೀಸಲಿಟ್ಟಿರುವ ಅನುದಾನದಲ್ಲಿ ಈವರೆಗೆ ಎಷ್ಟು ಹಣ ಖರ್ಚಾಗಿದೆ ?	ರೈತ ಸಿರಿ ಯೋಜನೆಯನ್ನು ಶಿವಮೊಗ್ಗ, ಕೊಡಗು, ಉತ್ತರ ಕನ್ನಡ, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಯೋಜನೆಯಡಿ ಪ್ರೋತ್ಸಾಹಧನವನ್ನು 2021-22 ನೇ ಸಾಲಿನ ಬೆಳೆ ಸಮೀಕ್ಷೆ ಆಧಾರದ ಮೇರೆಗೆ ಸಿರಿಧಾನ್ಯ ಬೆಳೆಗಾರರಿಗೆ ಪಾವತಿಸಬೇಕಾಗಿರುವುದರಿಂದ ಪ್ರಸಕ್ತ ಸಾಲಿನ ಬೆಳೆ ಸಮೀಕ್ಷೆ ವರದಿಯ ನಿರೀಕ್ಷಣೆಯಲ್ಲಿದ್ದು, ರಾಜ್ಯವಲಯದಡಿ ಮೀಸಲಿಟ್ಟಿರುವ ರೂ.12.75 ಕೋಟಿ ಅನುದಾನವನ್ನು ವರದಿ ಪಡೆದ ಕೂಡಲೇ ವೆಚ್ಚ ಭರಿಸಲು ಕ್ರಮಕೈಗೊಳ್ಳಲಾಗುವುದು.

ಸಂಖ್ಯೆ: AGRI-AML/177/2021

(ಬಿ.ಸಿ. ಪಾಟೀಲ್)

ಕೃಷಿ ಸಚಿವರು